ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

12

ಇಲಾಖೆ / ವಿಷಯ : DEPARTMENT / SUBJECT: ಗೃಹ - ಸಿಡಿ ಪ್ರಕರಣ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 9/3/21

# ಜಾರಕಿಹೊಳಿ ಮನವಿ ಮೇಲೆ ತನಿಖೆ: ಬೊಮ್ಮಾಯಿ

**ಬೆಂಗಳೂರು:** ತಮ್ಮ ಕುರಿತು ಬಿಡುಗಡೆಯಾಗಿರುವ ವಿಡಿಯೊ ಸಿಡಿ ಹಿಂದೆ ಷಡ್ಯಂತ್ರ ಇದೆ ಎಂದು ಮಾಜಿ ಸಚಿವ ರಮೇಶ್ ಜಾರಕಿಹೊಳಿ ಪತ್ರ ಬರೆದಿದ್ದರು, ಅವರ ಪತ್ರದ ಆಧಾರದಲ್ಲಿ ಪ್ರಾಥಮಿಕ ತನಿಖೆ ನಡೆಸಲಾಗುತ್ತದೆ ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿ, ರಮೇಶ್ ಜಾರಕಿಹೊಳಿಯವರು ಸಿಡಿ ಹಿಂದೆ ಷಡ್ಯಂತ್ರ ಇದೆ ಎಂದು ಪತ್ರ ಬರೆದಿದ್ದರು. ಹೀಗಾಗಿ ಎಸ್ಐಟಿ ತನಿಗೆಗೆ ಕೊಟ್ಟಿದ್ದೇವೆ. ಇಷ್ಟೇ ದಿನದಲ್ಲಿ ತನಿಖೆ ಮುಗಿಸಿ ಎಂದು ಸಮಯ ನಿಗದಿ ಮಾಡಲು ಆಗುವುದಿಲ್ಲ, ಈ ಪ್ರಕರಣದಲ್ಲಿ ಪೊಲೀಸರಿಗೆ ಪೂರ್ಣ ಸ್ವತಂತ್ರ ಕೊಟ್ಟಿದ್ದೇವೆ. ರಾಜ್ಯದ ಜನತೆಗೆ ಸತ್ಯ ಗೊತ್ತಾಗಲಿ ಎಂದು ಶೀಘ್ರವಾಗಿ ತನಿಖೆ ನಡೆಸಿ ವರದಿ ಕೊಡಲು ಹೇಳಿದ್ದೇವೆ ಎಂದರು. ಎಸ್ಐಟಿಯವರು ಸಂಪೂರ್ಣ ತನಿಖೆ ನಡೆಸುತ್ತಾರೆ. ಕಬ್ಬನ್ ಪಾರ್ಕ್‌ನಲ್ಲಿ ದೂರು ನೀಡಿದ್ದು, ವಾಪಸ್ ಪಡೆದಿದ್ದು, ಎಲ್ಲವನ್ನೂ ಎಸ್ಐಟಿ ತನಿಖೆಯಲ್ಲಿ ಪರಿಗಣಿಸುತ್ತವೆ. ರಮೇಶ್ ಜಾರಕಿಹೊಳಿ ಪತ್ರದ ಆಧಾರದ ಮೇಲೆ ಪ್ರಾಥಮಿಕ ತನಿಖೆ ನಡೆಸಿ, ತನಿಖೆಯಲ್ಲಿ ಏನು ಬೆಳವಣಿಗೆ ಆಗುತ್ತದೆ ಎನ್ನುವುದನ್ನು ನೋಡಿ ಅವಶ್ಯಕತೆ ಬಿದ್ದರೆ ಎಫ್ಐಆರ್ ದಾಖಲಾಗುತ್ತದೆ ಎಂದರು. ನಕಲಿ ಸಿಡಿ ಆದ ಮೇಲೆ ತನಿಖೆ ಏಕೆ ಎಂಬ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ನಕಲಿ ಸಿಡಿ ಮಾಡಿದವರು ಯಾರು, ಅದರ ಹಿನ್ನೆಲೆಯಲ್ಲಿ ಯಾರು ಕೆಲಸ ಮಾಡಿದ್ದಾರೆ. ಎಲ್ಲೆಲ್ಲಿ ಸಿಡಿ ಮಾಡಲಾಗಿದೆ ಎಲ್ಲವೂ ತನಿಖೆ ಆಗಬೇಕು. ಶರ್ಟ್, ಪ್ಯಾಂಟ್ ಬಿಚ್ಚಲಿಕ್ಕೆ ಕಾಂಗ್ರೆಸ್‌ನವರು ಕಾರಣನಾ ಎಂಬ ಹೇಳಿಕೆಗೆ ಅದೆಲ್ಲಾ ತನಿಖೆಯಲ್ಲಿ ಗೊತ್ತಾಗುತ್ತದೆ ಎಂದರು.